ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೫**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತ ನಾಲ್ಕನೇ ಅಧಿವೇಶನ**

**ಸೋಮವಾರ, ದಿನಾಂಕ: ೧೯ನೇ ಫೆಬ್ರವರಿ, ೨೦೧೮**

---

**ಸಮೂಹ – I**

೧. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೨. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೩. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೪. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೫. ವೈದ್ಯಕೀಯ ಶಿಕ್ಷಣ ಸಚಿವರು

೬. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

೭. ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು

---

## ಯುನಾನಿ ಆಸ್ಪತ್ರೆ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು)–**

೬೧(೪೬೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆ, ರಾಮನಗರ ಪಟ್ಟಣದಲ್ಲಿ ಸರ್ಕಾರಿ ಯುನಾನಿ ಆಸ್ಪತ್ರೆ ಹಾಗೂ ಜಿಲ್ಲಾ ಆಯುಷ್ ಕಛೇರಿಗಾಗಿ ಜಮೀನು ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಮಂಜೂರಾತಿಯಾಗಿದ್ದು ಯಾವಾಗ; ಹಾಗೂ ಸರ್ಕಾರಿ ಯುನಾನಿ ಆಸ್ಪತ್ರೆಯ ನಿರ್ಮಾಣಕ್ಕಾಗಿ ಅಂದಾಜು ವೆಚ್ಚ ತಯಾರಿಸಿ ಅನುದಾನ ಬಿಡುಗಡೆ ಮಾಡಲಾಗಿದೆಯೇ; ಮಾಡದೇ ಇದ್ದಲ್ಲಿ, ಕಾರಣಗಳೇನು? (ಸಂಪೂರ್ಣ ವಿವರ ನೀಡುವುದು)

## ೨೫ ಸಾವಿರ ಕ್ವಿಂಟಾಲ್ ಪಡಿತರ ಹುಳುಪಾಲಾದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೨(೪೩೩) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರದ ತಪ್ಪಿನಿಂದಾಗಿ ೧೨ ಕೋಟಿ ರೂಪಾಯಿ ಮೌಲ್ಯದ ಆಹಾರಧಾನ್ಯ ಹುಳುಹಿಡಿದು ಕೊಳೆತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು)

(ಆ) ಇದಕ್ಕೆ ಹೊಣೆಗಾರರು ಯಾರು; ಇದಕ್ಕೆ ಸಂಬಂಧಿಸಿದ ಅಧಿಕಾರಿಗಳ ಹೆಸರು ಮತ್ತು ಹುದ್ದೆಯೊಂದಿಗೆ ವಿವರ ನೀಡುವುದು;

(ಇ) ಹಾಳಾಗಿರುವ ೨೫ ಸಾವಿರ ಕ್ವಿಂಟಾಲ್ ಅಧಿಕ ಪಡಿತರದ ಜಿಲ್ಲಾವಾರು ಮಾಹಿತಿಯ ವಿವರವನ್ನು ನೀಡುವುದು;

(ಈ) ಹುಳುಹಿಡಿದ ಗೋಧಿಯನ್ನು ಮತ್ತೆ ವಿತರಣೆ ಮಾಡಿರುವುದು ನಿಜವೇ; ಹಾಗಿದ್ದಲ್ಲಿ, ತಪ್ಪಿತಸ್ಥ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮವೇನು? (ವಿವರ ನೀಡುವುದು)

## ಜೈವಿಕ ತಂತ್ರಜ್ಞಾನದಿಂದ ರೂಪಿಸಲಾಗಿರುವ ಕಾರ್ಯಕ್ರಮಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೩(೬೬೩) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಜೈವಿಕ ತಂತ್ರಜ್ಞಾನದಿಂದ ರೂಪಿಸಲಾಗಿರುವ ಕಾರ್ಯಕ್ರಮಗಳಾವುವು; (ವಿವರ ನೀಡುವುದು)

(ಆ) ಈ ತಂತ್ರಜ್ಞಾನದಿಂದ ನೇರವಾಗಿ ರೈತರ ಬೆಳೆಗಳಿಗೆ ಅನುಕೂಲವಾಗಲು ಕೈಗೊಂಡಿರುವ ರೂಪುರೇಷೆಗಳೇನು;

(ಇ) ಜೈವಿಕ ತಂತ್ರಜ್ಞಾನದಡಿಯಲ್ಲಿ ಯಾವ ಯಾವ ಬೆಳೆಗಳಿಗೆ ಅನುಕೂಲವಿದೆ; ಈ ನಿಟ್ಟಿನಲ್ಲಿ ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಬೆಂಗಳೂರು ನಗರ ಜಿಲ್ಲೆಯಲ್ಲಿ ಈ ತಂತ್ರಜ್ಞಾನದಡಿಯಲ್ಲಿ ಮಂಜೂರಾಗಿರುವ ಅನುದಾನದ ಮೊತ್ತವೆಷ್ಟು; ಖರ್ಚಾಗಿರುವ ಮೊತ್ತವೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಡೆಂಗ್ಯೂ ಮತ್ತು ಚಿಕುನ್‌ಗುನ್ಯದಂತಹ ಮಾರಕ ಖಾಯಿಲೆಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೪(೬೦೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾಸನ ಜಿಲ್ಲೆಯಲ್ಲಿ ಡೆಂಗ್ಯೂ ಮತ್ತು ಚಿಕುನ್‌ಗುನ್ಯದಂತಹ ಮಾರಕ ಖಾಯಿಲೆಗಳನ್ನು ನಿಯಂತ್ರಿಸಲು ಜಿಲ್ಲಾ ಆರೋಗ್ಯ ಇಲಾಖೆಯಿಂದ ಕೈಗೊಂಡಿರುವ ಕ್ರಮಗಳೇನು;

(ಆ) ಈ ಖಾಯಿಲೆಗಳಿಗೆ ಸರ್ಕಾರದಿಂದ ಉಚಿತ ಚಿಕಿತ್ಸೆ ನೀಡಲಾಗುತ್ತಿದೆಯೇ; ಹಾಸನ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಜನರಿಗೆ ಚಿಕಿತ್ಸೆ ನೀಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಈ ಖಾಯಿಲೆಗಳಿಗೆ ಸಮರ್ಪಕ ಚಿಕಿತ್ಸೆ ದೊರೆಯದೆ ಕಳೆದ ೩ ವರ್ಷಗಳಲ್ಲಿ ಯಾರಾದರೂ ಮರಣ ಹೊಂದಿದ್ದಾರೆಯೇ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ಖಾಯಿಲೆಗಳಿಂದ ಮರಣ ಹೊಂದುವವರಿಗೆ ಸರ್ಕಾರದಿಂದ ಏನಾದರೂ ಧನ ಸಹಾಯ ನೀಡಲಾಗುತ್ತಿದೆಯೇ? (ವಿವರ ನೀಡುವುದು)

**ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಜನಗಣತಿ ಸಮೀಕ್ಷೆಯ ಬಗ್ಗೆ**

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)** –

೬೫(೭೨೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಜನಗಣತಿ ಸಮೀಕ್ಷೆ ನಡೆಸಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಜನಗಣತಿ ಸಮೀಕ್ಷೆಯ ಫಲಿತಾಂಶವನ್ನು ಸರ್ಕಾರವು ಪ್ರಕಟಿಸಲು ಬೇಕಾಗಿರುವ ಕಾಲಾವಕಾಶವೆಷ್ಟು;

(ಇ) ಮೀಸಲಾತಿಯನ್ನು ಜಾತಿವಾರು ನಿಗದಿ ಮಾಡಲಾಗುವುದೇ; ಅಥವಾ ಒಳಪಂಗಡವಾರು ನಿಗದಿ ಮಾಡಲಾಗುವುದೇ; ಈ ಬಗ್ಗೆ ಸರ್ಕಾರದ ತೀರ್ಮಾನ ಏನು? (ಸಂಪೂರ್ಣ ವಿವರ ನೀಡುವುದು)

**ರಾಜ್ಯದಲ್ಲಿ ಉದ್ಭವಿಸಿರುವ ಮಾರಕ ಖಾಯಿಲೆಗಳ ಕುರಿತು**

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)** –

೬೬(೬೫೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೪ ವರ್ಷದಿಂದೀಚೆಗೆ ಯಾವ ಯಾವ ಖಾಯಿಲೆಗಳು ಪತ್ತೆಯಾಗಿವೆ; ಡೆಂಗ್ಯೂ, ಚಿಕುನ್‌ಗುನ್ಯ, ಮಲೇರಿಯಾ ಮುಂತಾದ ಖಾಯಿಲೆಗಳಿಗೆ ಎಷ್ಟು ಜನ ಚಿಕಿತ್ಸೆ ಪಡೆದಿದ್ದಾರೆ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ೪ ವರ್ಷದಿಂದೀಚೆಗೆ ಈ ಖಾಯಿಲೆಗಳಿಗೆ ಬಲಿಯಾಗಿರುವವರ ಸಂಖ್ಯೆ ಎಷ್ಟು; ಬಲಿಯಾದವರ (ಸಾವಿಗೊಳಗಾದವರು) ಕುಟುಂಬಗಳಿಗೆ ಸರ್ಕಾರ ಪರಿಹಾರ ನೀಡಲಾಗಿದೆಯೇ; (ನೀಡಿದ್ದಲ್ಲಿ, ಮಾಹಿತಿ ನೀಡುವುದು)

(ಇ) ಆರೋಗ್ಯ ದೃಷ್ಟಿಯಿಂದ ಜನರಲ್ಲಿ ಜಾಗೃತಿ ಮೂಡಿಸಲು ಸರ್ಕಾರ ಮುಂದಾಗಿದೆಯೇ; ಯಾವ ರೀತಿಯಲ್ಲಿ ಜಾಗೃತಿ ಮೂಡಿಸುತ್ತಿದೆ; ಮಾಹಿತಿ ನೀಡುವುದು, ಹಾಗೂ ವೆಚ್ಚದ ವಿವರ ನೀಡುವುದು;

(ಈ) ಕರ್ನಾಟಕ ರಾಜ್ಯದ ಆರೋಗ್ಯ ಇಲಾಖೆಗೆ ಕಳೆದ ೪ ವರ್ಷದಿಂದ ಇಲ್ಲಿಯವರೆಗೆ ಕೇಂದ್ರ ಸರ್ಕಾರ ಹಾಗೂ ಇನ್ನಿತರೆ ಮೂಲಗಳಿಂದ ಅನುದಾನ ಬಂದಿದೆಯೇ; ಬಂದಿದ್ದಲ್ಲಿ, ವರ್ಷಾವಾರು ಮಾಹಿತಿ ನೀಡುವುದು; ಹಾಗೂ ಅನುದಾನ ಬಳಕೆಯ ವಿವರ ನೀಡುವುದು;

(ಉ) ಡೆಂಗ್ಯೂ, ಮಲೇರಿಯಾ, ಚಿಕುನ್‌ಗುನ್ಯ ಖಾಯಿಲೆಗಳ ಪತ್ತೆಗಾಗಿ ಕೆಲವು ಖಾಸಗಿ ಆಸ್ಪತ್ರೆ ಮತ್ತು ಲ್ಯಾಬ್‌ಗಳು ಬಡರೋಗಿಗಳನ್ನು ಸುಲಿಗೆ ಮಾಡುತ್ತಿವೆಯೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಇಂತಹ ಎಷ್ಟು ಪ್ರಕರಣಗಳು ದಾಖಲಾಗಿವೆ; ಯಾವ ಕ್ರಮ ಕೈಗೊಳ್ಳಲಾಗಿದೆ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಶಿಕ್ಷಣ ಇಲಾಖೆಯ ನೌಕರರನ್ನು ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿಲೀನಗೊಳಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೬೭(೬೯೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಕಳೆದ ೩ ವರ್ಷಗಳಿಂದ ಎಷ್ಟು ಜನ ನೌಕರರು ಬೇರೆ ಬೇರೆ ಇಲಾಖೆಗಳಿಂದ ಖಾಯಂ ಆಗಿ ವಿಲೀನ ಹೊಂದಿರುತ್ತಾರೆ; ವಿವರವಾಗಿ ನೌಕರರ ಹೆಸರು, ಮಾತೃ ಇಲಾಖೆ, ಹುದ್ದೆಯ ಪದನಾಮ, ವೇತನ ಶ್ರೇಣಿ, ಹಾಗೂ ಸಮಾಜ ಕಲ್ಯಾಣ ಇಲಾಖೆಯಡಿ ವಿಲೀನಗೊಂಡ ಹುದ್ದೆಯ ಪದನಾಮ, ವೇತನ ಶ್ರೇಣಿ ಒಳಗೊಂಡಂತೆ ವರ್ಷಾವಾರು ವಿವರವಾದ ಮಾಹಿತಿ ನೀಡುವುದು;

(ಆ) ವಿಲೀನಗೊಂಡ ನೌಕರರಲ್ಲಿ ಶಿಕ್ಷಣ ಇಲಾಖೆಯಿಂದ ಬಂದವರೆಷ್ಟು; ಹೆಸರಿನೊಂದಿಗೆ ವಿವರವಾದ ಮಾಹಿತಿ ನೀಡುವುದು;

(ಇ) ಶಿಕ್ಷಣ ಇಲಾಖೆಯ ನೌಕರರನ್ನು ಈ ರೀತಿ ವಿಲೀನಗೊಳಿಸುವುದರಿಂದ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗಿ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೊಂದರೆ ಆಗುತ್ತಿರುವುದು ನಿಜವೇ;

(ಈ) ಇದರ ಸಂಬಂಧ ಸಮಾಜ ಕಲ್ಯಾಣ ಇಲಾಖೆಯು ಯಾವ ಕ್ರಮ ಕೈಗೊಂಡಿದೆ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೮(೭೨೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಡಿಯಲ್ಲಿ ಎಷ್ಟು ವಸತಿ ನಿಲಯ/ಶಾಲೆಗಳಿವೆ; ಮಕ್ಕಳ ಸಂಖ್ಯೆ ಎಷ್ಟು; ಖರ್ಚಾಗುತ್ತಿರುವ ವಾರ್ಷಿಕ ಅನುದಾನ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಇಲಾಖೆಯಿಂದ ಎಷ್ಟು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಗ್ರೂಪ್ 'ಡಿ' ಮತ್ತು ಅಡುಗೆ ಸಹಾಯಕರ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಗ್ರಾಮೀಣ ಪುನರ್ವಸತಿ ಕಾರ್ಯಕರ್ತರುಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೬೯(೬೭೬) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿಯಲ್ಲಿ ರಾಜ್ಯಾದ್ಯಂತ ಕರ್ತವ್ಯ ನಿರ್ವಹಿಸುತ್ತಿರುವ ವಿವಿಧೋದ್ದೇಶ ಮತ್ತು ಗ್ರಾಮೀಣ ಪುನರ್ವಸತಿ (ಎಂ.ಆರ್.ಡಬ್ಲ್ಯೂ) ಕಾರ್ಯಕರ್ತರುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಗ್ರಾಮಪಂಚಾಯಿತಿ ಮಟ್ಟದಿಂದ ತಾಲ್ಲೂಕು ಹಂತದವರೆಗೆ ಕಾರ್ಯಕರ್ತರನ್ನು ನೇಮಿಸಿ ವಿಕಲಚೇತನರಿಗೆ ಸೌಲಭ್ಯಗಳನ್ನು ತಲುಪಿಸಲಾಗುತ್ತಿದೆಯೇ; ನೇಮಕ ಮಾಡದೇ ಖಾಲಿ ಇದ್ದ ಪಕ್ಷದಲ್ಲಿ ಆ ಪ್ರಕ್ರಿಯೆಗೆ ಇರುವ ಅಡೆತಡೆಗಳೇನು; ಸದರಿಯವರ ನೇಮಕ ಪ್ರಕ್ರಿಯೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಇ) ಕರ್ತವ್ಯನಿರತ ಕಾರ್ಯಕರ್ತರು ಮರಣ ಹೊಂದಿದ ಪಕ್ಷದಲ್ಲಿ ಅವರ ಅವಲಂಬಿತರಿಗೆ ಸರ್ಕಾರ ಒದಗಿಸುತ್ತಿರುವ ಪರಿಹಾರಗಳೇನು;

(ಈ) ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಯಕರ್ತರ ಜೀವನೋಪಾಯಕ್ಕಾಗಿ ಸರ್ಕಾರದಿಂದ ಸಿಗುತ್ತಿರುವ ಸೌಲಭ್ಯಗಳೇನು? (ಸಂಪೂರ್ಣವಾದ ಮಾಹಿತಿಯನ್ನು ನೀಡುವುದು)

## ಗಂಗಾ ಕಲ್ಯಾಣ ಯೋಜನೆಯಡಿ ಕೊರೆಸಿರುವ ಕೊಳವೆ ಬಾವಿಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೦(೫೯೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ೨೦೧೭–೧೮ನೇ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಇಲ್ಲಿಯತನಕ ಎಷ್ಟು ಕೊಳವೆ ಬಾವಿಗಳನ್ನು ಕೊರೆಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೊರೆಸಿರುವ ಕೊಳವೆ ಬಾವಿಗಳಿಗೆ ಸಂಪೂರ್ಣವಾಗಿ ವಿದ್ಯುತ್ ಸಂಪರ್ಕವನ್ನು ಕಲ್ಪಿಸಿಕೊಡಲಾಗಿದೆಯೇ; (ವಿವರ ನೀಡುವುದು)

(ಇ) ವಿದ್ಯುತ್ ಸಂಪರ್ಕವನ್ನು ಕಲ್ಪಿಸದೇ ಇರುವ ಕೊಳವೆ ಬಾವಿಗಳಿಗೆ ಎಷ್ಟು ದಿನಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಿಕೊಡಲಾಗುವುದು; (ವಿವರ ನೀಡುವುದು)

(ಈ) ೨೦೧೭–೧೮ನೇ ಸಾಲಿನಲ್ಲಿ ಈ ಯೋಜನೆಗೆ ಆಯವ್ಯಯದಲ್ಲಿ ಎಷ್ಟು ಅನುದಾನವನ್ನು ಒದಗಿಸಲಾಗಿತ್ತು; ಇದರಲ್ಲಿ ಖರ್ಚು ಮಾಡಿರುವ ಹಣವೆಷ್ಟು? (ಜಿಲ್ಲಾವಾರು ವಿವರ ನೀಡುವುದು)

## ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆಯುವ ಕಂಬಳಗಳಿಗೆ ಪ್ರೋತ್ಸಾಹ ಧನ/ಅನುದಾನ ನೀಡುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೧(೭೦೦) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಬಹಳ ಅನಾದಿಕಾಲದಿಂದಲೂ ಕೃಷಿ, ಮನೋರಂಜನೆ ಕ್ರೀಡೆ, ದೈವಾರಾಧನೆ ಹಾಗೂ ಸಾಂಸ್ಕೃತಿಕ ಚಟುವಟಿಕೆಯಾಗಿ ಕಂಬಳಗಳನ್ನು ನಡೆಸಲಾಗುತ್ತಿದ್ದು, ಪ್ರಸ್ತುತ ಅವು ನಶಿಸಿ ಹೋಗುತ್ತಿರುವುದಕ್ಕೆ ಕಾರಣಗಳೇನು;

(ಆ) ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಪ್ರತಿ ವರ್ಷ ನಡೆಯುವ ಕಂಬಳಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು)

(ಇ) ಕಂಬಳಗಳನ್ನು ನಡೆಸಲು ಈವರೆಗೆ ಸರ್ಕಾರದಿಂದ ಪ್ರೋತ್ಸಾಹಧನ ಅಥವಾ ಅನುದಾನ ಬಿಡುಗಡೆ ಮಾಡಲಾಗಿದೆಯೇ; (ವರ್ಷವಾರು ವಿವರ ನೀಡುವುದು)

(ಈ) ಈ ಹಿಂದಿನ ಸರ್ಕಾರವು ಕಂಬಳಗಳಿಗೆ ಅನುದಾನ ಅಥವಾ ಪ್ರೋತ್ಸಾಹ ಧನ ನೀಡಿರುವುದು ನಿಜವೇ; ನೀಡಿದ್ದಲ್ಲಿ, ವಿವರ ನೀಡುವುದು;

(ಉ) ಕಂಬಳಗಳಿಗೆ ಪ್ರೋತ್ಸಾಹಧನ, ಅನುದಾನ ನೀಡುವ ಬಗ್ಗೆ ಯೋಜನೆ ರೂಪಿಸಲು ಸರ್ಕಾರ ಚಿಂತನೆ ಹೊಂದಿದೆಯೇ; ಇಲ್ಲವಾದಲ್ಲಿ, ಕಾರಣವೇನು?

## ಅಂಗನವಾಡಿ ಕೇಂದ್ರಗಳು ಮತ್ತು ಫಲಾನುಭವಿಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೭೨(೪೫೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳೆಷ್ಟು; ಅವು ಎಲ್ಲೆಲ್ಲಿವೆ; (ವಿವರ ನೀಡುವುದು)

(ಆ) ಅಂಗನವಾಡಿ ಕೇಂದ್ರಗಳಿಂದ ಒಟ್ಟು ಎಷ್ಟು ಜನ ಫಲಾನುಭವಿಗಳಿಗೆ ಸೌಲಭ್ಯ ದೊರೆತಿದೆ;

(ಇ) ಒಟ್ಟು ಎಷ್ಟು ಜನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ;

(ಈ) ಫಲಾನುಭವಿಗಳಿಗೆ ಪ್ರತಿನಿತ್ಯ ನೀಡುತ್ತಿರುವ ಆಹಾರಗಳೇನು; ಅದಕ್ಕಾಗಿ ಸರ್ಕಾರ ನೀಡುತ್ತಿರುವ ಅನುದಾನವೆಷ್ಟು? (ವಿವರ ನೀಡುವುದು)

## P.T.C.L. ಕಾಯ್ದೆ ಜಾರಿ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೭೩(೪೪೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕದಲ್ಲಿ ೦೧-೦೫-೨೦೧೩ ರಿಂದ ಇಲ್ಲಿಯವರೆಗೆ ಪಿ.ಟಿ.ಸಿ.ಎಲ್. ಕಾಯ್ದೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಮೇಲೆ ನಡೆದಿರುವ ದೌರ್ಜನ್ಯಕ್ಕೆ ಅನುಗುಣವಾಗಿ ಎಷ್ಟು ಪ್ರಕರಣಗಳು ದಾಖಲಾಗಿರುತ್ತವೆ; ಇವುಗಳಲ್ಲಿ ವರದಿಯಾಗಿರುವ/ದೂರು ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ತನಿಖೆಯಲ್ಲಿರುವ ಪ್ರಕರಣಗಳ ಸಂಖ್ಯೆ ಎಷ್ಟು; ದೋಷಾರೋಪಣೆ ಸಲ್ಲಿಕೆಯಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಶಿಕ್ಷೆಗೆ ಒಳಗಾಗಿರುವ ಮತ್ತು ಆರೋಪಮುಕ್ತವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಬಿ. ವರದಿ ಸಲ್ಲಿಕೆಯಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ೦೧-೦೫-೨೦೧೩ ರಿಂದ ಇಲ್ಲಿಯವರೆಗೆ ಕರ್ನಾಟಕದಲ್ಲಿ ಕೊಲೆಯಾಗಿರುವ, ಅತ್ಯಾಚಾರಕ್ಕೆ ಒಳಗಾಗಿರುವ, ಗಂಭೀರ ಸ್ವರೂಪದ ಹಲ್ಲೆಗೆ ಒಳಗಾಗಿರುವ, ಐ.ಪಿ.ಸಿ. ಕಾಯ್ದೆಯ ಇತರೆ ಕಲಂಗಳ ಅನ್ವಯ ಕ್ರಿಮಿನಲ್ ಪ್ರಕರಣಗಳಿಂದ ಬಾಧಿತರಾಗಿರುವ, Arson ಪ್ರಕರಣಗಳಲ್ಲಿ ಬಾಧಿತರಾಗಿರುವ ಮತ್ತು ಇತರೆ POA ಪ್ರಕರಣಗಳಲ್ಲಿ ಬಾಧಿತರಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಪ್ರಕರಣಗಳು ಎಷ್ಟು;

(ಇ) ಕರ್ನಾಟಕದಲ್ಲಿ ಕ್ರಿಮಿನಲ್ ಪ್ರಕರಣಗಳ ಮುಖಾಂತರ ಶೋಷಣೆಗೆ ಒಳಗಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಯಾವ

ಯಾವ ಪ್ರಕರಣದಲ್ಲಿ ಎಷ್ಟು ಎಷ್ಟು ಪರಿಹಾರವನ್ನು ನೀಡಲಾಗುತ್ತಿದೆ. ೧೧–೦೫–೨೦೧೩ರಿಂದ ಇಲ್ಲಿಯವರೆಗೆ ಎಷ್ಟು ಪರಿಹಾರವನ್ನು ನೀಡಲಾಗಿದೆ; ಪಾವತಿಗೆ ಬಾಕಿಯಿರುವ ಪರಿಹಾರ ಎಷ್ಟು; ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಂಟಿಯಾಗಿ ಯಾವ ಯಾವ ಪ್ರಕರಣದಲ್ಲಿ ಪರಿಹಾರವನ್ನು ನೀಡುತ್ತಿವೆ; ಇಲ್ಲಿಯವರೆಗೆ ಎಷ್ಟು ಹಣ ನೀಡಲಾಗಿದೆ; ಪಾವತಿಗೆ ಬಾಕಿಯಿರುವ ಹಣ ಎಷ್ಟು?

## ಪ್ರವಾಸೋದ್ಯಮ ಸ್ಥಳಗಳನ್ನು ಕಾರ್ಪೋರೇಟ್ ಸಂಸ್ಥೆಗಳ ಸಹಭಾಗಿತ್ವದಲ್ಲಿ ಅಭಿವೃದ್ಧಿಗೊಳಿಸುವ ಬಗ್ಗೆ

**ಶ್ರೀ ಲಹರ್‌ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು)** –

೭೪(೭೦೬) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಪ್ರವಾಸೋದ್ಯಮ ಸ್ಥಳಗಳನ್ನು ಕಾರ್ಪೋರೇಟ್ ಸಂಸ್ಥೆಗಳ ಸಹಭಾಗಿತ್ವದಲ್ಲಿ ಅಭಿವೃದ್ಧಿಗೊಳಿಸಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ರಾಜ್ಯದಲ್ಲಿ ಎಷ್ಟು ಸ್ಥಳಗಳನ್ನು ಆಯ್ಕೆ ಮಾಡಲಾಗಿದೆ; (ವಿವರ ನೀಡುವುದು)

(ಆ) ಸದರಿ ಯೋಜನೆ ಆರಂಭವಾದಾಗಿನಿಂದ ಯಾವ ಯಾವ ಪ್ರವಾಸೋದ್ಯಮ ಸ್ಥಳಗಳನ್ನು ಯಾವ ಯಾವ ಕಾರ್ಪೋರೇಟ್ ಸಂಸ್ಥೆಗಳಿಗೆ ದತ್ತು ನೀಡಲಾಗಿದೆ; (ಜಿಲ್ಲಾವಾರು ದತ್ತು ನೀಡಿದ ಸ್ಥಳಗಳ ವಿವರ ನೀಡುವುದು)

(ಇ) ಕಾರ್ಪೋರೇಟ್ ಸಂಸ್ಥೆಗಳು ತಾವು ದತ್ತು ಪಡೆದ ಸ್ಥಳಗಳಲ್ಲಿ ಅಭಿವೃದ್ಧಿಗಾಗಿ ಹೂಡಿಕೆ ಅಥವಾ ಖರ್ಚು ಮಾಡಿದ ಹಣವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ಕಾರ್ಪೋರೇಟ್ ಸಂಸ್ಥೆಗಳು ಅಭಿವೃದ್ಧಿ ಮಾಡಿದ ಕೆಲಸಗಳ ಬಗ್ಗೆ ಸರ್ಕಾರ ಆಡಿಟ್ ನಡೆಸಿ ಕೆಲಸಗಳ ಬಗ್ಗೆ ವರದಿ ಪಡೆದಿದೆಯೇ; (ವಿವರ ನೀಡುವುದು)

(ಉ) ಕೆಲವು ಸಂಸ್ಥೆಗಳು ಕೇವಲ ಹೆಸರು ಪ್ರಚಾರಕ್ಕೆ ಮಾತ್ರ ಸ್ಥಳಗಳನ್ನು ದತ್ತು ಪಡೆದು. ಸದರಿ ಸ್ಥಳಗಳ ಬಗ್ಗೆ ಮೌನ ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಂತಹ ಸಂಸ್ಥೆಗಳು ಎಸಗಿದ ಲೋಪದ ವಿರುದ್ಧ ಸರ್ಕಾರ ಕ್ರಮ ಜರುಗಿಸುವುದೇ?

## ರಾಜ್ಯದ ಹಾಸ್ಟೆಲ್/ವಸತಿ ಶಾಲೆಗಳಲ್ಲಿ ಅಹಿತಕರ ಪ್ರಕರಣಗಳು ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫(೬೮೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಸತಿ ಶಾಲೆ/ಹಾಸ್ಟೆಲ್‌ಗಳ ಅವ್ಯವಸ್ಥೆಗಳಿಂದ ಅಹಿತಕರ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ವಸತಿ ಶಾಲೆಗಳಲ್ಲಿ ದೌರ್ಜನ್ಯ ಪ್ರಕರಣಗಳು, ಒತ್ತಡದಿಂದ ವಿದ್ಯಾರ್ಥಿಗಳ ಆತ್ಮಹತ್ಯೆಗಳು ಇಂತಹ ಅಹಿತಕರ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರವು ತೆಗೆದುಕೊಂಡ ಕ್ರಮಗಳೇನು;

(ಇ) ರಾಜ್ಯದಲ್ಲಿ ಹಾಸ್ಟೆಲ್‌ಗಳು ಹಾಗೂ ವಸತಿ ಶಾಲೆಗಳನ್ನು ನಿಯಂತ್ರಿಸಲು ಮತ್ತು ಅವುಗಳನ್ನು ಸುಧಾರಿಸಲು ಸರ್ಕಾರವು ಕಾನೂನಾತ್ಮಕ ನಿಯಮಗಳನ್ನು ರೂಪಿಸಲಿದೆಯೇ; (ವಿವರ ನೀಡುವುದು)

(ಈ) ಹಾಸ್ಟೆಲ್‌ಗಳು ಹಾಗೂ ವಸತಿ ಶಾಲೆಗಳಲ್ಲಿ ಮಕ್ಕಳನ್ನು ದೌರ್ಜನ್ಯ ಮತ್ತು ಒತ್ತಡದಿಂದ ರಕ್ಷಿಸಲು ಹಾಗೂ ಅವರಿಗೆ ಸೂಕ್ತ ವ್ಯವಸ್ಥೆ ಕಲ್ಪಿಸಿಕೊಡಲು ಸರ್ಕಾರ ಏನೇನು ಕ್ರಮಗಳನ್ನು ತೆಗೆದುಕೊಂಡಿದೆ; (ವಿವರ ನೀಡುವುದು)

(ಉ) ಹಾಸ್ಟೆಲ್‌ಗಳು ಹಾಗೂ ವಸತಿ ಶಾಲೆಗಳನ್ನು ನಿಯಂತ್ರಿಸಲು ಯಾವ ಕಾಲಮಿತಿಯಲ್ಲಿ ಸುವ್ಯವಸ್ಥಿತ ಹಾಗೂ ರಕ್ಷಣಾತ್ಮಕ ನಿಯಮಗಳನ್ನು ರೂಪಿಸಿ ಜಾರಿಗೊಳಿಸಲಾಗುವುದು?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. ಕಾಸೂ 963 – 1500 ಪ್ರತಿಗಳು (ಪಿ)